**ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಲಯ ಮಾಗಡಿ**

# ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 291 / 2013

**ಚಾಸಾ ಃ- 05 / ಪ್ರಾಸಾ ಃ- 02**

| | |
|---|---|
| ಹೆಸರು | ರಾಘವೇಂದ್ರ ಜಿ |
| ತಂದೆ ಹೆಸರು | ಗುರುಮೂರ್ತಿ |
| ವಯಸ್ಸು | 37 |
| ಉದ್ಯೋಗ | ಖಾಸಗಿ ವ್ಯವಹಾರ |
| ವಿಳಾಸ | ಬಾಗಲೂರು , ದೇವನಹಳ್ಳಿ ತಾಲ್ಲೂಕು |

**ದಿನಾಂಕಃ 09.01.2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ಪಪಂಚನಾಮೆಯನ್ನು ಜರುಗಿಸಿರುವುದಿಲ್ಲ. ಈಗ ಸಾಕ್ಷಿಗೆ ಧೃಡೀಕೃತ ನಕಲಿನ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತಮಂ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಪಂಚನಾಮೆಯನ್ನು ನಿಪಿ- 2 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿನಾಂಕ 06.08.2012 ರಂದು ನನ್ನ ಹಾಗೂ ಚಾಸಾ-4 ರವರ

ಸಮಕ್ಷಮ ಕಾಲೇಜು ರಸ್ತೆ ವಿನೋದ್ ಆಳ್ವಾ ಫಾರಂ ಹೌಸ್ ರಸ್ತೆಯಲ್ಲಿ ಬೆಳಿಗ್ಗೆ 9.45 ಗಂಟೆಯಿಂದ 11.15 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿರುವುದಿಲ್ಲ ಎಂದು ನುಡಿಯತ್ತಾರೆ. ನಿಮ್ಮ ಸಮಕ್ಷಮ ಪಂಚನಾಮೆಯನ್ನು ಜರುಗಿಸಿದ್ದರೂ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು** :-

ಆರೋಪಿ ಪರ ವಕೀಲರು ಪಾಟೀಸವಾಲುಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ.**
**ಮಾಗಡಿ.**